# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | **763** |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತಾರಾಮ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 18.08.2025 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಪ್ರಶ್ನೆ. ಸಂ | ವಿಷಯ | ಕ್ರಮ |
|---|---|---|
| ಅ | ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ತಾಲ್ಲೂಕಿನ ಮೈನಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಮೈನಳ್ಳಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಬೇಕೆಂದು ಸ್ಥಳೀಯರಿಂದ ನಿರಂತರ ಬೇಡಿಕೆಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಅರ್ಜಿಗಳ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳ ಕುರಿತು ವಿವರ ನೀಡುವುದು; | ಬಂದಿದೆ.<br><br>ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ತಾಲ್ಲೂಕಿನಲ್ಲಿ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅವಕಾಶವಿದ್ದು, ಪ್ರಸ್ತುತ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ. ನಿಯಮಾನುಸಾರ ಮುಂಡಗೋಡು ತಾಲ್ಲೂಕಿನ ಮೈನಳ್ಳಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ |
| ಆ | ಸುತ್ತಮುತ್ತಲಿನ 15ಕ್ಕೂ ಹೆಚ್ಚು ಹಳ್ಳಿಗಳ ಜನರಿಗೆ ಪ್ರಾಥಮಿಕ ಆರೋಗ್ಯ ಕೇಂದ್ರದ ಅವಶ್ಯಕತೆ ಇರುವುದರಿಂದ ಮೈನಳ್ಳಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಇರುವ ಮಾನದಂಡಗಳು ಯಾವುವು; ಮತ್ತು ಈ ಕುರಿತು ಸರ್ಕಾರ ತೆಗೆದುಕೊಳ್ಳುವ ಕ್ರಮಗಳ ಕುರಿತು ವಿವರ ನೀಡುವುದು? | IPHS norms 2022ರನ್ವಯ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳನ್ನು ಜನಸಂಖ್ಯೆ ಆಧಾರದ ಮೇಲೆ ಸ್ಥಾಪಿಸಲಾಗುತ್ತಿದ್ದು, ಸಮತಟ್ಟು ಪ್ರದೇಶದಲ್ಲಿ 30,000 ಜನಸಂಖ್ಯೆ ಮತ್ತು ಗುಡ್ಡಗಾಡು, ಗಿರಿಜನ ಪ್ರದೇಶದಲ್ಲಿ 20000 ಜನಸಂಖ್ಯೆಗೆ ಅನುಗುಣವಾಗಿ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿದೆ.<br><br>ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡು ತಾಲ್ಲೂಕಿನಲ್ಲಿ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸಲು ಅವಕಾಶವಿದ್ದು, ಪ್ರಸ್ತುತ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ. ನಿಯಮಾನುಸಾರ ಮುಂಡಗೋಡು ತಾಲ್ಲೂಕಿನ ಮೈನಳ್ಳಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸಲು ಅವಕಾಶವಿರುವುದಿಲ್ಲ |

**ಆಕುಕ 116 ಎಸ್‌ಎಂಎಂ 2025**

**ದಿನೇಶ್ ಗುಂಡೂರಾವ್**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**